ಈ) ಈ ಕೂಡು ರಸ್ತೆಯನ್ನು ರಾಜ್ಯ ಪ್ರವಾಸೋದ್ಯಮ ಇಲಾಖೆಯ ವತಿಯಿಂದ ಅಭಿವೃದ್ಧಿಪಡಿಸಲು ಸಾಧ್ಯವಿಲ್ಲವೇ?

ಶ್ರೀ ಜಿ.ಜನಾರ್ಧನ ರೆಡ್ಡಿ (ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು) :

ಅ) ಹೌದು.

Yes

ಆ) ಹೌದು

Yes

ಇ) ಹಾಸನ ಜಿಲ್ಲೆ ಬೇಲೂರು ತಾಲ್ಲೂಕಿನ ಹಳೇಬೀಡು ದೇವಸ್ಥಾನಕ್ಕೆ ಸೇರುವ ಕೂಡು ರಸ್ತೆಯು (ಜಿಲ್ಲಾ ಮುಖ್ಯ ರಸ್ತೆ) 1.60 ಕಿಮೀ ಉದ್ದವಿದ್ದು, ಸದರಿ ರಸ್ತೆಯನ್ನು 1992–93ರಲ್ಲಿ ಡಾಂಬರೀಕರಣ ಮಾಡಲಾಗಿದೆ. ತದನಂತರ ಪ್ರತಿ ವರ್ಷ ಲಭ್ಯವಿರುವ ಅನುದಾನದಲ್ಲಿ ಗುಂಡಿ ಮುಚ್ಚಿ ವಾರ್ಷಿಕ ನಿರ್ವಹಣೆ ಮಾಡಿ ಸಂಚಾರಕ್ಕೆ ಯೋಗ್ಯಗೊಳಿಸಲಾಗುತ್ತಿದೆ.

ಈ) ಈ ರಸ್ತೆಯನ್ನು ಲೋಕೋಪಯೋಗಿ ಇಲಾಖೆ ಅಧೀನದಲ್ಲಿದ್ದು ಈ ರಸ್ತೆಯ ಅಭಿವೃದ್ಧಿಯನ್ನು ಲೋಕೋಪಯೋಗಿ ಇಲಾಖೆಯಿಂದಲೇ ಕೈಗೊಳ್ಳಬೇಕಾಗಿರುತ್ತದೆ.

This road is under the control of PWD and PWD has to develop this road.

764 ಡಾ:ಶರಣ ಪ್ರಕಾಶ ರುದ್ರಪ್ಪ ಪಾಟೀಲ್(ಸೇಡಂ) : ಮಾನ್ಯ ಸಣ್ಣ ನೀರಾವರಿ, ಯೋಜನೆ ಹಾಗೂ ಸಾಂಖ್ಯಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2008–09ನೇ ಸಾಲಿನಲ್ಲಿ ಸ್ಥಳೀಯ ಶಾಸಕರ ಅನುದಾನದಡಿ ರೂ.150.00 ಲಕ್ಷದ ಕಾಮಗಾರಿಗಳ ಪ್ರಸ್ತಾವನೆ ಸಲ್ಲಿಸುವಂತೆ ಸೂಚನೆ ನೀಡಿದ ಪ್ರಕಾರ ಜಿಲ್ಲಾಧಿಕಾರಿಗಳ ಕಚೇರಿಗೆ ರೂ.150.00 ಲಕ್ಷದ ಪ್ರಸ್ತಾವನೆ ಸಲ್ಲಿಸಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಇಲ್ಲಿಯವರೆಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; ಉಳಿದ ಹಣ ಯಾವಾಗ ಬಿಡುಗಡೆ ಮಾಡಲಾಗುವುದು?

ಶ್ರೀ ಗೋವಿಂದ ಎಂ.ಕಾರಜೋಳ (ಸಣ್ಣ ನೀರಾವರಿ, ಯೋಜನಾ ಹಾಗೂ ಸಾಂಖ್ಯಿಕ ಸಚಿವರು) :

ಅ) ಹೌದು.

ಆ) ಪ್ರಥಮ ಕಂತಿನ ಅನುದಾನ ರೂ. 50.00 ಲಕ್ಷಗಳನ್ನು 2008–09 ರಲ್ಲಿ ಬಿಡುಗಡೆ ಮಾಡಲಾಗಿದೆ. ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿದ್ದರಿಂದ 2008–09ನೇ ಸಾಲಿನ 2ನೇ ಕಂತನ್ನು ಬಿಡುಗಡೆ ಮಾಡಲು ಸಾಧ್ಯವಾಗಿರುವುದಿಲ್ಲ. ಸದರಿ ಅನುದಾನವನ್ನು ಈ ಸಾಲಿನ ಪೂರಕ ಅಂದಾಜಿನಲ್ಲಿ ಒದಗಿಸಲು ಕ್ರಮ ಕೈಗೊಂಡಿದೆ. ಈ ಪೂರಕ ಅಂದಾಜಿಗೆ ಅಧಿವೇಶನದಲ್ಲಿ ಅನುಮೋದನೆ ದೊರೆತ ನಂತರ ಬಿಡುಗಡೆಗೊಳಿಸಲಾಗುವುದು. 2009–10ನೇ ಸಾಲಿನ ಆಯುವ್ಯಯದಲ್ಲಿ 1/3 ಭಾಗಕ್ಕೆ ಮಾತ್ರ ಲೇಖಾನುದಾನ ದೊರೆತಿರುವುದರಿಂದ ಈಗ ತಲಾ ರೂ.28.88 ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿದೆ. ಸಂಪೂರ್ಣ ಅನುದಾನಕ್ಕೆ ಲೇಖಾನುದಾನ ದೊರೆತ ನಂತರ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಮಾರ್ಗಸೂಚಿಗಳನುಸಾರ ಹಣ ಬಳಕೆ ಪ್ರಮಾಣ ಪತ್ರಗಳನ್ನಾಧರಿಸಿ ಉಳಿದ ಬಳಕೆ ಪ್ರಮಾಣ ಪತ್ರಗಳನ್ನಾಧರಿಸಿ ಉಳಿದ ಅನುದಾನವನ್ನು ಬಿಡುಗಡೆ ಮಾಡಲಾಗುವುದು.

969 ಶ್ರೀ ಕಿಮ್ಮನೆ ರತ್ನಾಕರ್ (ತೀರ್ಥಹಳ್ಳಿ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಬಾರ್ಡ್ RIDF-14 ಲೆಕ್ಕ ಶೀರ್ಷಿಕೆ ಅಡಿಯಲ್ಲಿ ಕಳೆದ ಸಾಲಿನಲ್ಲಿ ಶಿವಮೊಗ್ಗ ಜಿಲ್ಲೆಯ ವಿವಿಧ ವಿಧಾನಸಭಾ ಕ್ಷೇತ್ರದಲ್ಲಿ ಬಿಡುಗಡೆಯಾದ ಅನುದಾನದ ಮೊತ್ತವೆಷ್ಟು? ಮತ್ತು ಅಭಿವೃದ್ಧಿಗೊಳಿಸಲಾದ ರಸ್ತೆಗಳು ಎಷ್ಟು? (ವಿವರಗಳನ್ನು ನೀಡುವುದು);

ಆ) ಬಿಡುಗಡೆಯಾದ ಹಣದಲ್ಲಿ ವಿವಿಧ ಕ್ಷೇತ್ರದಲ್ಲಿ ಭಾರಿ ತಾರತಮ್ಯ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ತಾರತಮ್ಯ ಸರಿಪಡಿಸಲಾಗುವುದೇ?

ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು) :

ಅ) 2008–09ನೇ ಸಾಲಿನ ಆರ್.ಐ.ಡಿ.ಎಫ್–14ರ ಯೋಜನೆಯಡಿ ಲೋಕೋಪಯೋಗಿ ಇಲಾಖೆಯಡಿ ಶಿವಮೊಗ್ಗ ಜಿಲ್ಲೆಯಲ್ಲಿ ನಬಾರ್ಡ್‌ನಿಂದ ಅನುಮೋದನೆಯಾದ ರಸ್ತೆ / ಸೇತುವೆ ಕಾಮಗಾರಿಗಳ ಕ್ಷೇತ್ರವಾರು ವಿವರವನ್ನು